# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:-** ಚಾಲೆಂಜ್ ಫಂಡ್ ಯೋಜನೆಯಡಿ ಸೃಜನಾತ್ಮಕವಾದ ಹಾಗೂ ಪರಿಣಾಮಕಾರಿಯಾದ ಯೋಜನೆಗಳನ್ನು ಸರ್ಕಾರದ ಇಲಾಖೆಗಳು ಹಾಗೂ ಸಂಸ್ಥೆಗಳಲ್ಲಿ ಜಾರಿಗೆ ತರುವ ಸಲುವಾಗಿ ವಿಶೇಷಾಧಿಕಾರಿ, ಟ್ರಾಮಾ ಕೇರ್ ಸೆಂಟರ್, ಬೆಂಗಳೂರು, ಇವರಿಗೆ, ಕೇಂದ್ರದಲ್ಲಿ ರೋಗಿಗಳ ಓಡಾಟಕ್ಕೆ ಸುಗಮ ವ್ಯವಸ್ಥೆ ಕಲ್ಪಿಸುವ ಯೋಜನೆಗೆ ಅನುದಾನ ಬಿಡುಗಡೆ ಮಾಡುವ ಬಗ್ಗೆ.

**ಓದಲಾಗಿದೆ:**
1) ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 92 ಇಆಸು 2009, ದಿನಾಂಕ:08.07.2010.
2) ಸರ್ಕಾರದ ಅಧೀನ ಕಾರ್ಯದರ್ಶಿ, ವೈದ್ಯಕೀಯ ಶಿಕ್ಷಣ ಇಲಾಖೆ ಇವರ ಟಿ.ಟಿ. ಸಂಖ್ಯೆ: ಆಕುಕ 181 ಎಂಎಂಸಿ 2018, ದಿನಾಂಕ:30.05.2018.
3) ದಿನಾಂಕ: 08.01.2019 ರಂದು ಸರ್ಕಾರದ ಮುಖ್ಯ ಕಾರ್ಯದರ್ಶಿಯವರ ಅಧ್ಯಕ್ಷತೆಯಲ್ಲಿ ನಡೆದ ಚಾಲೆಂಜ್ ಫಂಡ್ ಯೋಜನೆಯ ಬಗ್ಗೆ ನಡೆದ ಸಭಾ ನಡವಳಿಗಳು.

**ಪ್ರಸ್ತಾವನೆ:**

ಮೇಲೆ ಓದಲಾದ (1)ರ ದಿನಾಂಕ: 08.07.2010ರ ಸರ್ಕಾರದ ಆದೇಶದಲ್ಲಿ ಸೃಜನಾತ್ಮಕವಾದ ಹಾಗೂ ಪರಿಣಾಮಕಾರಿಯಾದ ಯೋಜನೆಗಳನ್ನು ಸರ್ಕಾರದ ಇಲಾಖೆಗಳು ಹಾಗೂ ಸಂಸ್ಥೆಗಳಲ್ಲಿ ಜಾರಿಗೆ ತರುವ ಸಲುವಾಗಿ ಚಾಲೆಂಜ್ ಫಂಡ್ ಯೋಜನೆಯನ್ನು ಸ್ಥಾಪಿಸಲಾಗಿದೆ. ಈ ಯೋಜನೆಯಲ್ಲಿ ಗುಣಮಟ್ಟದ ಗುರಿಗಳನ್ನು ಸಾಧಿಸಲು ಪ್ರಯೋಗಾತ್ಮಕ/ ವಿನೂತನ ಯೋಜನೆಗಳನ್ನು ಅನುಷ್ಠಾನಗೊಳಿಸುವ ಸಲುವಾಗಿ ಅನುದಾನವನ್ನು ಬಿಡುಗಡೆ ಮಾಡಲು ಉದ್ದೇಶಿಸಿ ಪ್ರತಿ ವರ್ಷದ ಆಯವ್ಯಯದಲ್ಲಿ ಬೇಡಿಕೆಗನುಗುಣವಾಗಿ ಒಂದು ಮೊತ್ತದ ಅನುದಾನವನ್ನು ಹಂಚಿಕೆ ಮಾಡುವ ಕ್ರಮವಿರುತ್ತದೆ.

ಓದಲಾದ (2)ರ ಪ್ರಸ್ತಾವನೆಯಲ್ಲಿ, ವಿಶೇಷಾಧಿಕಾರಿ, ಟ್ರಾಮಾ ಕೇರ್ ಸೆಂಟರ್, ಬೆಂಗಳೂರು, ಇವರು, ಕೇಂದ್ರದಲ್ಲಿ ದಾಖಲಾಗುವ ಅಪಘಾತ ಮತ್ತು ತುರ್ತು ಚಿಕಿತ್ಸೆ ಒದಗಿಸಲು ಅನುವಾಗುವಂತೆ, ರೋಗಿಗಳ ಓಡಾಟಕ್ಕೆ ಸುಗಮ ವ್ಯವಸ್ಥೆಯನ್ನು ಕಲ್ಪಿಸಲು ತಯಾರಿಸಲಾಗಿರುವ ಯೋಜನಾ ವರದಿಯನ್ವಯ ಅಗತ್ಯವಿರುವ ರೂ.145.00 ಲಕ್ಷ ಅನುದಾನವನ್ನು ಚಾಲೆಂಜ್ ಫಂಡ್ ಯೋಜನೆಯಡಿ ಒದಗಿಸಲು ಕೋರಿರುತ್ತಾರೆ.

ಓದಲಾದ (3)ರಲ್ಲಿ, ಚಾಲೆಂಜ್ ಫಂಡ್ ಯೋಜನೆ ಜಾರಿಗೆ ಸಂಬಂಧಪಟ್ಟಂತೆ ಅನುದಾನ ಬಿಡುಗಡೆ ಮಾಡಲು ಸರ್ಕಾರದ ಮುಖ್ಯ ಕಾರ್ಯದರ್ಶಿಗಳ ಅಧ್ಯಕ್ಷತೆಯಲ್ಲಿ ದಿನಾಂಕ: 08.01.2019ರಂದು ನಡೆದ ಉನ್ನತಾಧಿಕಾರದ ಸಭೆಯಲ್ಲಿ, ಟ್ರಾಮಾ ಕೇರ್ ಸೆಂಟರ್, ಬೆಂಗಳೂರು,

ಇವರ ಪ್ರಸ್ತಾವನೆಯನ್ನು ಸಮಗ್ರವಾಗಿ ಪರಿಶೀಲಿಸಿ ರೂ.145.00 ಲಕ್ಷ ಅನುದಾನವನ್ನು ಮಂಜೂರು ಮಾಡಲು ಒಪ್ಪಲಾಯಿತು.

**ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 118 ಇಆಸು 2018**
**ಬೆಂಗಳೂರು, ದಿನಾಂಕ: 06.02.2019.**

ಪ್ರಸ್ತಾವನೆಯಲ್ಲಿ ವಿವರಿಸಿರುವಂತೆ ಸರ್ಕಾರದ ಚಾಲೆಂಜ್ ಫಂಡ್ ಯೋಜನೆಯಡಿ ಸೃಜನಾತ್ಮಕವಾದ ಹಾಗೂ ಪರಿಣಾಮಕಾರಿಯಾದ ಯೋಜನೆಗಳನ್ನು ಸರ್ಕಾರದ ಇಲಾಖೆಗಳು ಹಾಗೂ ಸಂಸ್ಥೆಗಳಲ್ಲಿ ಜಾರಿಗೆ ತರುವ ಸಲುವಾಗಿ, ವಿಶೇಷಾಧಿಕಾರಿ, ಟ್ರಾಮಾ ಕೇರ್ ಸೆಂಟರ್, ಬೆಂಗಳೂರು, ಇವರಿಗೆ, ಕೇಂದ್ರದಲ್ಲಿ ದಾಖಲಾಗುವ ಅಪಘಾತ ಮತ್ತು ತುರ್ತು ಚಿಕಿತ್ಸೆ ಪ್ರಕರಣಗಳಲ್ಲಿ ರೋಗಿಗಳ ಓಡಾಟಕ್ಕೆ ಸುಗಮ ವ್ಯವಸ್ಥೆಯನ್ನು ಕಲ್ಪಿಸುವ ಯೋಜನೆಗೆ ರೂ.**145.00** ಲಕ್ಷ (ಒಂದು ನೂರಾ ನಲವತ್ತೈದು ಲಕ್ಷ ಮಾತ್ರ) ಅನುದಾನವನ್ನು ಈ ಕೆಳಕಾಣಿಸಿದ ಅಂಶಗಳನ್ನು ಪಾಲಿಸುವ ಷರತ್ತಿಗೊಳಪಟ್ಟು 2018-19ರ ಸಾಲಿಗೆ ಮಂಜೂರು ಮಾಡಲಾಗಿದೆ.

1. ಕೆಟಿಪಿಪಿ ಕಾಯ್ದೆಯನ್ನು ಅನುಸರಿಸುವ ಷರತ್ತಿಗೊಳಪಟ್ಟು, ಸೇವಾ ಪೂರೈಕೆದಾರರ ಏಜನ್ಸಿ (service providers) ಮೂಲಕ ಹೊರಗುತ್ತಿಗೆ ಆಧಾರದ ಮೇಲೆ 70 ಅಟೆಂಡರ್ಸ್‌ಗಳ ಸೇವೆಯನ್ನು ವೀಲ್‌ಚೇರ್ ಮತ್ತು ಸ್ಟ್ರೆಚರ್‌ಗಳೊಂದಿಗೆ ಒದಗಿಸಿಕೊಳ್ಳುವುದು.
2. ಸೇವಾ ಮಟ್ಟ (service level)ವನ್ನು ಕರೆಯುವ ಟೆಂಡರ್‌ನಲ್ಲಿ ನಿರ್ದಿಷ್ಟವಾಗಿ ಸೂಚಿಸತಕ್ಕದ್ದು ಹಾಗೂ ನಿಗದಿಪಡಿಸಿದ ಸೇವೆಯನ್ನು ಸೂಕ್ತವಾಗಿ ಏಜನ್ಸಿ ಒದಗಿಸದೇ ಇದ್ದಲ್ಲಿ ದಂಡವನ್ನು ವಿಧಿಸುವ ಬಗ್ಗೆ ಸಹ ನಿರ್ದಿಷ್ಟಪಡಿಸತಕ್ಕದ್ದು.
3. ಸೇವಾ ಪೂರೈಕೆದಾರರಿಂದ ಪಡೆಯುವ ಅಟೆಂಡರ್ ಗಳ ಹಾಜರಾತಿಯನ್ನು ಬಯೋ ಮೆಟ್ರಿಕ್ ಮೂಲಕ ಖಚಿತಪಡಿಸಿಕೊಳ್ಳುವುದು.
4. ಸೇವಾ ಪೂರೈಕೆದಾರರಿಂದ ಪಡೆಯುವ ಅಟೆಂಡರ್‌ಗಳನ್ನು ಹಾಗೂ ವೀಲ್‌ಚೇರ್ ಮತ್ತು ಸ್ಟ್ರೆಚರ್‌ಗಳನ್ನು ಪ್ರತ್ಯೇಕವಾಗಿ ಗುರುತಿಸಲು ಕ್ರಮ ಕೈಗೊಳ್ಳುವುದು.
5. ಮುಂದಿನ ಆರ್ಥಿಕ ವರ್ಷದಲ್ಲಿ ಈ ವ್ಯವಸ್ಥೆಯನ್ನು ಮುಂದುವರೆಸುವುದಿದ್ದಲ್ಲಿ, ಈ ವೆಚ್ಚವನ್ನು ಹೆಚ್ಚುವರಿ ಅನುದಾನವನ್ನು ಸರ್ಕಾರದಿಂದ ಕೋರದೇ ಟ್ರಾಮಾ ಕೇರ್ ಸೆಂಟರ್ ತನ್ನದೇ ಸಂಪನ್ಮೂಲದಿಂದ ಅಥವಾ ಸರ್ಕಾರ ಆಯವ್ಯಯದಲ್ಲಿ ಒದಗಿಸುವ ಅನುದಾನದ ಮಿತಿಯೊಳಗೆ ಭರಿಸತಕ್ಕದ್ದು.

2) ಈ ಅನುದಾನವನ್ನು ಟ್ರಾಮಾ ಕೇರ್ ಸೆಂಟರ್‌ನ ಕೋಡ್ DP0034 ಗೆ ಬಿಡುಗಡೆ ಮಾಡಲು ಕ್ರಮ ವಹಿಸಲಾಗಿದೆ. ಈ ಅನುದಾನವನ್ನು ಅಗತ್ಯತೆಗೆ ಅನುಗುಣವಾಗಿ ಖರ್ಚು ಹಾಕತಕ್ಕದ್ದು ಹಾಗೂ ಅನುದಾನ ಬಿಡುಗಡೆಯಾದ ಒಂದು ವರ್ಷದೊಳಗಾಗಿ ಯೋಜನೆಯನ್ನು ಸಮರ್ಪಕವಾಗಿ ನಿರ್ವಹಿಸಿ ಅನುದಾನ ಬಳಕೆಯ ಪ್ರಮಾಣ ಪತ್ರವನ್ನು ಯೋಜನೆ ನಿರ್ವಹಿಸುವ ಅಧಿಕಾರಿ ಸಕಾಲದಲ್ಲಿ ತಪ್ಪದೇ ಒದಗಿಸುವುದು. ತಪ್ಪಿದಲ್ಲಿ, ಬಿಡುಗಡೆಯಾದ ಅನುದಾನವನ್ನು, ಅನುದಾನದ ಮೇಲೆ ಸಂಚಿತವಾಗುವ ಬಡ್ಡಿಯೊಂದಿಗೆ ಸರ್ಕಾರಕ್ಕೆ ಹಿಂದಿರುಗಿಸತಕ್ಕದ್ದು.

.3.

3) ಈ ವೆಚ್ಚವನ್ನು ಲೆಕ್ಕ ಶೀರ್ಷಿಕೆ 2052-00-090-0-25-059 ಇತರೆ ಖರ್ಚುಗಳು ಆಡಳಿತ ಸುಧಾರಣೆ ಸವಾಲು ನಿಧಿ- ಅಡಿಯಲ್ಲಿ ಭರಿಸತಕ್ಕದ್ದು.

4) ಈ ಯೋಜನೆಯನ್ನು ಪೂರೈಸಿದ ನಂತರ ಅಧಿಕೃತ ಸಂಸ್ಥೆಯಿಂದ ಲೆಕ್ಕಪರಿಶೋಧನೆ (3rd party inspection) ಮಾಡಿಸಿ ವರದಿಯನ್ನು ಸಲ್ಲಿಸತಕ್ಕದ್ದು.

5) ಸದರಿ ಸಂಸ್ಥೆಗೆ ಸರ್ಕಾರದಿಂದ ಬಿಡುಗಡೆ ಮಾಡುವ ಮೊತ್ತವು ಸಹಾಯ ಅನುದಾನವಾಗಿದ್ದು ಇದು ಯಾವುದೇ ತೆರಿಗೆಗೆ ಒಳಪಡುವುದಿಲ್ಲ ಆದ್ದರಿಂದ ಯಾವುದೇ ತೆರಿಗೆಯನ್ನು ಕಟಾಯಿಸದೇ ಪೂರ್ಣ ಮೊತ್ತವನ್ನು ಬಿಡುಗಡೆ ಮಾಡಲು ಲೆಕ್ಕಪತ್ರ ಶಾಖೆಯು ಅಗತ್ಯ ಕ್ರಮ ವಹಿಸತಕ್ಕದ್ದು.

5) ಈ ಆದೇಶವನ್ನು ಆರ್ಥಿಕ ಇಲಾಖೆಯ ಆದೇಶ ಸಂಖ್ಯೆ: ಆಇ 04 ಟಿಎಫ್‌ಪಿ 2018, ದಿನಾಂಕ: 29.09.2018ರಲ್ಲಿ ಆಡಳಿತ ಇಲಾಖೆಗಳ ಪ್ರಧಾನ ಕಾರ್ಯದರ್ಶಿ/ಕಾರ್ಯದರ್ಶಿಗಳಿಗೆ ಪ್ರತ್ಯಾಯೋಜಿಸಲಾಗಿರುವ ಅಧಿಕಾರದನ್ವಯ ಹೊರಡಿಸಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಹಾಗೂ ಅವರ ಹೆಸರಿನಲ್ಲಿ,

ಸುಜಾತ ಹೆಚ್.ಎಸ್
**(ಸುಜಾತ ಹೆಚ್.ಎಸ್.)**
ಸರ್ಕಾರದ ಅಧೀನ ಕಾರ್ಯದರ್ಶಿ,
ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ
(ಆಡಳಿತ ಸುಧಾರಣೆ-ತರಬೇತಿ)

**ಪ್ರತಿ:**

1. ಮಹಾಲೇಖಪಾಲರು ಕರ್ನಾಟಕ, (ಆಡಿಟ್ 1 ಮತ್ತು 2) (ಲೆಕ್ಕಪತ್ರ 1 ಮತ್ತು 2), ಬೆಂಗಳೂರು.
2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು.
3. ಸರ್ಕಾರದ ಪ್ರಧಾನ ಕಾರ್ಯದರ್ಶಿ, ವೈದ್ಯಕೀಯ ಶಿಕ್ಷಣ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
4. ವಿಶೇಷಾಧಿಕಾರಿ, ಟ್ರಾಮಾ ಕೇರ್ ಸೆಂಟರ್, ಬೆಂಗಳೂರು.
5. ಯೋಜನಾ ನಿರ್ದೇಶಕರು, ಖಜಾನೆ-2, ವಾಣಿಜ್ಯ ತೆರಿಗೆಗಳ ಇಲಾಖೆ ಕಟ್ಟಡ, ಕಾಳಿದಾಸ ರಸ್ತೆ, ಗಾಂಧೀನಗರ, ಬೆಂಗಳೂರು.
6. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಸಿಆಸುಇ (ಆಸು) ರವರ ಆಪ್ತ ಕಾರ್ಯದರ್ಶಿ.
7. ಸರ್ಕಾರದ ಉಪ ಕಾರ್ಯದರ್ಶಿ, ಸಿಆಸುಇ (ಆಸು) ರವರ ಆಪ್ತ ಸಹಾಯಕರು.
8. ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.

***